**Akashvani : Bangalore**
**Regional Bulletin In Kannada**
**09.03.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**09.03.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ವಿಧಾನಮಂಡಲದ ಉಭಯ ಸದನಗಳಲ್ಲಿ, ಅಗಲಿದ ಗಣ್ಯರಿಗೆ ಗೌರವಾರ್ಪಣೆ**

**೨. ಹೆಚ್ಚುವರಿ ಅಗತ್ಯ ಪೂರೈಸಲು ಕೇರಳದಿಂದ ಟ್ರಾನ್ಸ್‌ಫಾರ್ಮರ್ ಖರೀದಿ -ಸಚಿವ ಕೆ.ಜೆ.ಜಾರ್ಜ್**

**೩. ಕೆಎಸ್‌ಐಸಿ ಯಿಂದ ಕಳೆದ ಮೂರು ವರ್ಷಗಳಲ್ಲಿ ೩ ಲಕ್ಷದ ೧೦ ಸಾವಿರಕ್ಕೂ ಹೆಚ್ಚು ರೇಷ್ಮೆ ಸೀರೆ ಉತ್ಪಾದನೆ**

**೪. ಐಸಿಸಿ ಟಿ-೨೦ ಕ್ರಿಕೆಟ್; ಭಾರತಕ್ಕೆ ವಿಶ್ವಕಪ್; ಗಣ್ಯರ ಹರ್ಷ, ಅಭಿನಂದನೆ**

**೫. ದೊಡ್ಡಬಳ್ಳಾಪುರದಲ್ಲಿ ರಾಜ್ಯಮಟ್ಟದ ಮಹಿಳಾ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಪಂದ್ಯಾವಳಿ ಆರಂಭ**

**<><*<><>*><>**

ರಾಜ್ಯ ವಿಧಾನಮಂಡಲದ ಉಭಯ ಸದನಗಳು ಇಂದು ಸಮಾವೇಶಗೊಂಡು ಇತ್ತೀಚೆಗೆ ಅಗಲಿದ ಗಣ್ಯರ ಸ್ಮರಣಾರ್ಥ ಗೌರವ ನಮನ ಸಲ್ಲಿಸಿದವು. ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ವಿಧಾನಸಭೆಯ ಮಾಜಿ ಸದಸ್ಯರಾದ ಅಪ್ಪಣ್ಣ ಹೆಗಡೆ ಮತ್ತು ವೈ.ಎಂ.ವೀರಣ್ಣ ಅವರ ನಿಧನಕ್ಕೆ ಸಂತಾಪ ಸೂಚಿಸುವ ನಿರ್ಣಯ ಮಂಡಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಅಪ್ಪಣ್ಣ ಹೆಗಡೆ ಹಾಗೂ ವೈ.ಎಂ.ವೀರಣ್ಣ ಅವರು ಸಾರ್ವಜನಿಕ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಶ್ಲಾಘಿಸಿ ಇಬ್ಬರು ಸಾಧಕರ ನಿಧನಕ್ಕೆ ಸಂತಾಪ ಸೂಚಿಸಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ ಅಪ್ಪಣ್ಣ ಹೆಗಡೆ ಹಾಗೂ ವೈ.ಎಂ.ವೀರಣ್ಣ ಅವರು ರಾಜಕೀಯ, ಶಿಕ್ಷಣ, ಧಾರ್ಮಿಕ ಸಾಮಾಜಿಕ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಶ್ಲಾಘಿಸಿದರು. ಸಂತಾಪ ಸೂಚಕ ನಿರ್ಣಯದ ಮೇಲೆ ಮಾತನಾಡಿದ ಶಾಸಕರಾದ ಹರೀಶ್, ಕಿರಣ್ ಕುಮಾರ್ ಕೊಡ್ಗಿ, ಗುರುರಾಜ್ ಗಂಟಿಹೊಳಿ ಅವರು ಅಪ್ಪಣ್ಣ ಹೆಗಡೆ ಹಾಗೂ ವೈ.ಎಂ.ವೀರಣ್ಣ ಸಲ್ಲಿಸಿದ ಸೇವೆಯನ್ನು ಶ್ಲಾಘಿಸಿ ಅವರ ನಿಧನಕ್ಕೆ ಸಂತಾಪ ಸೂಚಿಸಿದರು. ನಂತರ ಸದನದ ಸದಸ್ಯರು ಒಂದು ನಿಮಿಷ ಮೌನಾಚರಣೆ ಮಾಡಿ ಅಗಲಿದ ಗಣ್ಯರಿಗೆ ಗೌರವ ಸಲ್ಲಿಸಿದರು. ವಿಧಾನ ಪರಿಷತ್‌ನಲ್ಲಿಂದು ದಿನದ ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿಯವರು ಅಗಲಿದ ಗಣ್ಯರಿಗೆ ಗೌರವ ಸೂಚಿಸುವ ಸಂತಾಪ ನಿರ್ಣಯವನ್ನು ಮಂಡಿಸಿದರು. ವಿಧಾನ ಪರಿಷತ್ತಿನ ಮಾಜಿ ಸದಸ್ಯ ಬನ್ನೂರು ಅಪ್ಪಣ್ಣ ಹೆಗ್ಡೆ, ಹಿರಿಯ ಪತ್ರಕರ್ತ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯ ಪಿ.ರಾಮಯ್ಯ ಅವರ ಗೌರವಾರ್ಥ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಂತಾಪ ನಿರ್ಣಯದ ಮೇಲೆ ಆಡಳಿತ ಪಕ್ಷದ ನಾಯಕ ಎನ್.ಎಸ್.ಬೋಸರಾಜ್, ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವರು ಮಾತನಾಡಿ ಅಗಲಿದ ಗಣ್ಯರ ಸೇವೆಯನ್ನು ಸ್ಮರಿಸಿದರು. ನಂತರ ಒಂದು ನಿಮಿಷ ಮೌನ ಆಚರಿಸಿ, ಗೌರವ ಸಲ್ಲಿಸಲಾಯಿತು. ಬಳಿಕ ಸದನ ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡಿತು.

**<><*<><>*><>**

ರಾಜ್ಯದ ಸಂಸ್ಥೆಗಳಲ್ಲಿ ಅಗತ್ಯ ಪ್ರಮಾಣದ ಸರಬರಾಜು ಲಭ್ಯವಿಲ್ಲದ ಕಾರಣ ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳನ್ನು ಕೇರಳದಿಂದ ಖರೀದಿ ಮಾಡಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ಅವರು ತಿಳಿಸಿದ್ದಾರೆ. ಮೇಲ್ಮನೆಯಲ್ಲಿ ಇಂದು ಬಿಜೆಪಿಯ ರವಿಕುಮಾರ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ ಸಂಸ್ಥೆಯಲ್ಲಿ ಪ್ರಸ್ತುತ ಸುಮಾರು ೧೫ ಸಾವಿರ ಟ್ರಾನ್ಸ್‌ಫಾರ್ಮರ್ ಉತ್ಪಾದನೆ ನಡೆಯುತ್ತಿದ್ದು,

ಅದನ್ನು ೩೦ ಸಾವಿರಕ್ಕೆ ಹೆಚ್ಚಿಸಲಾಗಿದೆ. ಆದರೆ ರಾಜ್ಯದ ಅವಶ್ಯಕತೆ ಸುಮಾರು ೫೦ ಸಾವಿರ ಟ್ರಾನ್ಸ್‌ಫಾರ್ಮರ್‌ಗಳಷ್ಟಿದೆ. ಆದ್ದರಿಂದ ಹೆಚ್ಚುವರಿ ಅಗತ್ಯವನ್ನು ಪೂರೈಸಲು ಕಡಿಮೆ ದರದಲ್ಲಿ ಕೇರಳದ ಸಂಸ್ಥೆಯಿಂದ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಇದೇ ವೇಳೆ, ಹಣಕಾಸು ಇಲಾಖೆಯ ಅನುಮತಿ ದೊರೆತರೆ ಮಾತ್ರ ೪-ಜಿ ವಿನಾಯಿತಿಯಡಿ ಖರೀದಿ ಪ್ರಕ್ರಿಯೆ ನಡೆಸಲಾಗುತ್ತದೆ ಎಂದು ಕೂಡ ಸಚಿವರು ಸ್ಪಷ್ಟಪಡಿಸಿದರು.

<><*<><>*><>

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ-ಕೆಎಸ್‌ಐಸಿ ಕಳೆದ ಮೂರು ವರ್ಷಗಳಲ್ಲಿ ೩ ಲಕ್ಷ ೧೦ ಸಾವಿರದ ೬೭೭ ಸೀರೆಗಳನ್ನು ಉತ್ಪಾದಿಸಿದೆ ಎಂದು ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಇಂದು ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿಯ ಶ್ರೀವತ್ಸ.ಟಿ.ಎಸ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಒಟ್ಟು ಉತ್ಪಾದನೆಯಾದ ಸೀರೆಗಳ ಪೈಕಿ ೩ ಲಕ್ಷ ೯, ಸಾವಿರದ ೬೫೯ ಸೀರೆಗಳು ಮಾರಾಟವಾಗಿವೆ. ಅಂತಾರಾಷ್ಟ್ರೀಯ ಗ್ರಾಹಕರು ಮತ್ತು ರಾಷ್ಟ್ರದ ಇತರ ಭಾಗಗಳ ಗ್ರಾಹಕರು ಮೈಸೂರು ಸಿಲ್ಕ್ ಸೀರೆಗಳನ್ನು ಖರೀದಿಸಲು ಸೌಲಭ್ಯ ಕಲ್ಪಿಸಲಾಗಿದೆ ಎಂದರು. ಬೇಡಿಕೆಗೆ ತಕ್ಕಂತೆ ಮೈಸೂರು ಸಿಲ್ಕ್ ಸೀರೆಗಳ ಉತ್ಪಾದನೆ ಹೆಚ್ಚಿಸಲು ರೇಷ್ಮೆ ನೇಯ್ಗೆ ಘಟಕ ೨ ರಲ್ಲಿ ೧೦ ಇ-ಜಕಾರ್ಡ್ ಮಗ್ಗಗಳನ್ನು ಮತ್ತು ರೇಷ್ಮೆ ನೇಯ್ಗೆ ಘಟಕ ಚನ್ನಪಟ್ಟಣದಲ್ಲಿ ೨೦ ಇ-ಜಕಾರ್ಡ್ ಯಂತ್ರಗಳನ್ನು ಸ್ಥಾಪಿಸಲಾಗಿದ್ದು ಈ ಯಂತ್ರಗಳಿಂದ ಪ್ರತಿತಿಂಗಳು ಹೆಚ್ಚುವರಿಯಾಗಿ ೭ ಸಾವಿರದ ೫೦೦ ಮೀಟರನಷ್ಟು ಸೀರೆ ಉತ್ಪಾದನೆಯಾಗುತ್ತದೆ ಎಂದು ಸಚಿವರು ಹೇಳಿದರು. ಕೆಎಸ್‌ಐಸಿ, ೨೦೨೨-೨೩ ರಲ್ಲಿ ೪೬ ಕೋಟಿ ೭೫ ಲಕ್ಷ ರೂಪಾಯಿ, ೨೦೨೩-೨೪ ರಲ್ಲಿ ೭೩ ಕೋಟಿ ೪೦ ಲಕ್ಷ ರೂಪಾಯಿ ಹಾಗೂ ೨೦೨೪-೨೫ ರಲ್ಲಿ ೧೦೧ ಕೋಟಿ ೧೫ ಲಕ್ಷ ರೂಪಾಯಿ ಲಾಭಗಳಿಸಿದೆ ಎಂದು ಸಚಿವ ವೆಂಕಟೇಶ್ ವಿವರ ನೀಡಿದರು.

<><*<><>*><>

ಐಸಿಸಿ ಟಿ-೨೦ ಕ್ರಿಕೆಟ್‌ನಲ್ಲಿ ಭಾರತ ಮೂರನೇ ಬಾರಿ ವಿಶ್ವಕಪ್ ಗಳಿಸಿರುವುದಕ್ಕೆ ನಾಡಿನ ಗಣ್ಯರು ಹರ್ಷ ವ್ಯಕ್ತಪಡಿಸಿದ್ದು, ಕ್ರಿಕೆಟ್ ತಂಡವನ್ನು ಅಭಿನಂದಿಸಿದ್ದಾರೆ. ವಿಧಾನಸಭೆ, ಟಿ-೨೦ ವಿಶ್ವಕಪ್ ನಲ್ಲಿ ಭಾರತ ತಂಡದ ಅಭೂತಪೂರ್ವ ಗೆಲುವಿಗೆ ಅಭಿನಂದನೆ ಸಲ್ಲಿಸಿತು. ಈ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಿದ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಟಿ-೨೦ ವಿಶ್ವಕಪ್ ಪಂದ್ಯದಲ್ಲಿ ಭಾರತ ತಂಡ ಅಭೂತಪೂರ್ವ ಗೆಲುವು ಸಾಧಿಸಿದಕ್ಕೆ ಸದನದ ಪರವಾಗಿ ಅಭಿನಂದನೆ ಸಲ್ಲಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಸ್ತುತ ವಿಶ್ವಕಪ್ ಪಂದ್ಯಾವಳಿಯ ಮೊದಲ ದಿನದಿಂದಲೂ ಭಾರತ ತಂಡ, ಚಾಂಪಿಯನ್ ತರಹವೇ ಆಟವಾಡಿ ಪ್ರಶಸ್ತಿಗೆ ಅರ್ಹವೆಂಬುದನ್ನು ಸಾಬೀತುಪಡಿಸಿತು. ಪ್ರತಿಭಾವಂತ ಯುವ ತಂಡ ಎಲ್ಲಾ ವಿಧದಲ್ಲು ಪಾರಮ್ಯ ಮೆರೆದಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಈ ಗೆಲುವು ಅಪ್ರತಿಮ ಮತ್ತು ಅವಿರತ ಶ್ರಮದ ಪ್ರತಿಫಲವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಭಾರತದ ಒಗ್ಗಟ್ಟಿನ ತಂಡ ಸ್ಪೂರ್ತಿ ಆಟ ಅಮೋಘ ಗೆಲುವಿಗೆ ಕಾರಣವಾಯಿತು. ತಂಡ ಎಲ್ಲಾ ಕ್ಷೇತ್ರಗಳಲ್ಲಿ ಉತ್ತಮ ಪ್ರದರ್ಶನ ನೀಡಿತು ಎಂದು ಶ್ಲಾಘಿಸಿದ್ದಾರೆ.

<><*<><>*><>

ಕುಟುಂಬ, ಸಮಾಜ ಮತ್ತು ದೇಶದ ಏಳಿಗೆಗೆ ಮಹಿಳೆಯರ ಪಾತ್ರ ಅತ್ಯಾವಶ್ಯಕ ಎಂದು ಭಾರತೀಯ ಕಂಪನಿ ಕಾರ್ಯದರ್ಶಿಗಳ ಸಂಸ್ಥೆಯ ಬೆಂಗಳೂರು ಆವೃತ್ತಿಯ ಮಾಜಿ ಅಧ್ಯಕ್ಷೆ ದೇವಿಕಾ ಸತ್ಯನಾರಾಯಣ ತಿಳಿಸಿದ್ದಾರೆ. ಅವರು ಇಂದು ಬೆಂಗಳೂರು ಆಕಾಶವಾಣಿ ಆವರಣದಲ್ಲಿ ಆಯೋಜಿಸಲಾಗಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು. ಥಾಮಸ್ ಆಲ್ವಾ ಎಡಿಸನ್ ಯಶಸ್ವಿ ವಿಜ್ಞಾನಿಯಾಗಲು ಅವರ ತಾಯಿ ನೀಡಿದ ಭರವಸೆಯೇ ಕಾರಣ ಎಂದು ಹೇಳಿದ ಅವರು, ಗಗನಯಾನಿ ಕಲ್ಪನಾ ಚಾವ್ಲಾ ತಮ್ಮ ಯಶಸ್ಸು ಗಳಿಸಲು ತೋರಿದ ದೃಢ ಸಂಕಲ್ಪ ಮತ್ತು ಆತ್ಮವಿಶ್ವಾಸವನ್ನು ಪ್ರಸ್ತಾಪಿಸಿದರು. ಈ ಸಂದರ್ಭದಲ್ಲಿ

ಮಾತನಾಡಿದ ವರಮಾನ ತೆರಿಗೆ ಸಾರ್ವಜನಿಕ ಸಂಪರ್ಕ ಅಧಿಕಾರಿ ರತಿ ಮೆನನ್, ದುರ್ಘಟನೆಯಿಂದ ತಮ್ಮ ಒಂದು ಕೈ ಹಾಗೂ ಒಂದು ಕಾಲು ಕಳೆದುಕೊಂಡಾಗ, ತಾಯಿಯ ಬೆಂಬಲದಿಂದ ಜೀವನದಲ್ಲಿ ಸ್ವಾವಲಂಬಿಯಾಗಲು ತಮಗೆ ಹೇಗೆ ಸಾಧ್ಯವಾಯಿತು ಎಂಬುದನ್ನು ವಿವರಿಸಿದರು.

**ಧ್ವನಿ: ರತಿ ಮೆನನ್ ( ೨೬ ಸೆಕೆಂಡ್ಸ್)**

ಕಾರ್ಯಕ್ರಮದಲ್ಲಿ ಬೆಂಗಳೂರು ಆಕಾಶವಾಣಿ ನಿಲಯದ ಮುಖ್ಯಸ್ಥರಾದ ಕೆ.ಪಿ.ಸಂಜೀವ್, ದೂರದರ್ಶನ ಬೆಂಗಳೂರು ಕೇಂದ್ರದ ಮುಖ್ಯಸ್ಥರಾದ ಹನುಮಂತು ಹಾಗೂ ಆಕಾಶವಾಣಿಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

**<><*<><>*><>**

ಚಿಕ್ಕಮಗಳೂರು ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಒಟ್ಟು ೩ ದಿನಗಳ ಕಾಲ ಸ್ವ ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುತ್ತಿರುವ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು ಶಾಸಕ ಹೆಚ್.ಡಿತಮ್ಮಯ್ಯ ಇಂದು ಮೇಳಕ್ಕೆ ಚಾಲನೆ ನೀಡಿದರು. ಜಿಲ್ಲೆಯ ೨೨೬ ಗ್ರಾಮ ಪಂಚಾಯಿತಿಗಳಲ್ಲಿ ರಚಿಸಿರುವ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳ ಹಿಳೆಯರು ತಯಾರಿಸಿರುವ ಉತ್ತನ್ನಗಳನ್ನು ಪ್ರದರ್ಶನಕಿಡಲಾಗಿದೆ. ಇಲ್ಲಿ ಆಹಾರ ಪದಾರ್ಥಗಳು, ಕರಕುಶಲ ವಸ್ತುಗಳು, ಮಹಿಳೆಯರ ಕೃತಕ ಆಭರಣಗಳು, ಗೃಹ ಬಳಕೆ ವಸ್ತುಗಳು, ಹುಲ್ಲಿನಿಂದ ಮಾಡಿದ ಬುಟ್ಟಿಗಳು, ಸೆಣಬಿನ ಉತ್ಪನ್ನಗಳು ಸೇರಿದಂತೆ ಹಲವಾರು ಬಗೆಯ ಉತ್ಪನ್ನಗಳನ್ನು ಪ್ರದರ್ಶನ ಹಾಗೂ ಮಾರಾಟಕ್ಕಿಡಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್ ಕೀರ್ತನಾ ತಿಳಿಸಿದ್ದಾರೆ.

**<><*<><>*><>**

ಅಧಿಕಾರಿಗಳು ಜವಾಬ್ದಾರಿಯಿಂದ ಜನಗಣತಿ ಕಾರ್ಯ ನಿರ್ವಹಿಸಬೇಕು ಎಂದು ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಸೂಚಿಸಿದ್ದಾರೆ. ಅವರು, ಬಳ್ಳಾರಿಯಲ್ಲಿಂದು ಆಯೋಜಿಸಲಾಗಿದ್ದ ಜನಗಣತಿ ಕುರಿತ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. ಕೋವಿಡ್ ಸಾಂಕ್ರಾಮಿಕ ರೋಗದ ಕಾರಣದಿಂದ ವಿಳಂಬವಾಗಿದ್ದ ೨೦೨೧ರ ಜನಗಣತಿಯನ್ನು ಈಗ ಕೇಂದ್ರ ಸರ್ಕಾರದ ಆದೇಶದಂತೆ ಹೊಸದಾಗಿ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಬಾರಿಯ ಜನಗಣತಿಯಲ್ಲಿ ಮೊದಲ ಬಾರಿಗೆ ತಂತ್ರಜ್ಞಾನಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ದತ್ತಾಂಶಗಳನ್ನು ಆನ್‌ಲೈನ್ ಮೂಲಕವೇ ಸಂಗ್ರಹಿಸಲಾಗುತ್ತದೆ. ಬರುವ ಏಪ್ರಿಲ್ ೦೧ ರಿಂದ ೧೫ ರ ವರೆಗೆ ಸಾರ್ವಜನಿಕರಿಗೆ ಸ್ವಯಂ ಗಣತಿಗೆ ಅವಕಾಶ ಮತ್ತು ಏಪ್ರಿಲ್ ೧೬ ರಿಂದ ಮೇ ೧೬ ರವರೆಗೆ ಮನೆ ಪಟ್ಟಿ ಮಾಡುವ ಕ್ಷೇತ್ರ ಕಾರ್ಯ ನಡೆಯಲಿದೆ ಎಂದು ತಿಳಿಸಿದರು.

**<><*<><>*><>**

ದೊಡ್ಡಬಳ್ಳಾಪುರದಲ್ಲಿಂದು ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯ -ವಿಟಿಯು ರಾಜ್ಯ ಮಟ್ಟದ ಮಹಿಳಾ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್ ಪಂದ್ಯಾವಳಿ ಇಂದು ಆರಂಭವಾಯಿತು. ಪಂದ್ಯಾವಳಿಯಲ್ಲಿ ದೊಡ್ಡಬಳ್ಳಾಪುರ, ತುಮಕೂರು, ಮೈಸೂರು, ಹಾಸನ, ಮೂಡುಬಿದಿರೆ ಮಂಗಳೂರು, ಧಾರವಾಡ, ಬೆಂಗಳೂರು ಸೇರಿದಂತೆ ವಲಯವಾರು ತಂಡಗಳು ಭಾಗವಹಿಸಿವೆ. ಪಂದ್ಯಾವಳಿ ಮುಗಿದ ನಂತರ ಅಖಿಲ ಭಾರತ ವಿಶ್ವವಿದ್ಯಾಲಯಗಳ ಮಟ್ಟದ ಚಾಂಪಿಯನ್ ಷಿಪ್‌ನಲ್ಲಿ ಪಾಲ್ಗೊಳ್ಳಲಿರುವ ರಾಜ್ಯ ತಂಡ ಆಯ್ಕೆ ಪ್ರಕ್ರಿಯೆ ನಡೆಯಲಿದೆ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯದ ಕ್ರೀಡಾ ವಿಭಾಗದ ನಿರ್ದೇಶಕರಾದ ಮಲ್ಲಿಕಾರ್ಜುನ ಗೌಡ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**